# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)/ಪಿಆರ್/ 69/19-20

ಆಯುಕ್ತರವರ ಕಛೇರಿ
ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 02-08-2019

**ಸುತ್ತೋಲೆ**

**ವಿಷಯ:** ಪಾಲಿಕೆಯ ಕೇಂದ್ರ ಕಛೇರಿಯ ಆವರಣದಲ್ಲಿ ಅಧಿಕಾರಿ / ನೌಕರರು ಹಾಗೂ ಸಾರ್ವಜನಿಕರ ವಾಹನಗಳ ಓಡಾಟ / ನಿಲುಗಡೆಗಾಗಿ ಸೂಕ್ತ ವ್ಯವಸ್ಥೆಯನ್ನು ಜಾರಿಗೊಳಿಸುವ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪಾಲಿಕೆಯ ಕೇಂದ್ರ ಕಛೇರಿಯ ಆವರಣದಲ್ಲಿ ಕಛೇರಿ ವೇಳೆಯ ನಂತರ ಅಪರಿಚಿತ ವ್ಯಕ್ತಿಗಳು ವಾಹನ ನಿಲುಗಡೆ ಮಾಡುತ್ತಿರುವ ಬಗ್ಗೆ ಸಾಕಷ್ಟುದೂರುಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ಅಧಿಕಾರಿ / ನೌಕರರು ಹಾಗೂ ಸಾರ್ವಜನಿಕರ ವಾಹನಗಳ ನಿಲುಗಡೆಗಾಗಿ ಈ ಕೆಳಕಂಡಂತೆ ಸೂಕ್ತ ವ್ಯವಸ್ಥೆಯನ್ನು ಜಾರಿಗೊಳಿಸಿ ಆದೇಶಿಸಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಯ ಆವರಣಕ್ಕೆ ಬರುವ ವಾಹನಗಳಿಗೆ ಪ್ರವೇಶ ಹಾಗೂ ನಿರ್ಗಮನಕ್ಕಾಗಿ ಹಾಲಿ ಬಳಸಲಾಗುತ್ತಿರುವ ದ್ವಾರಗಳ ಪೈಕಿ ಉತ್ತರ ಬಾಗಿಲನ್ನು ಮಾತ್ರ ಬಳಸುವುದು ಹಾಗೂ ದಕ್ಷಿಣ ಬಾಗಿಲನ್ನು ಪ್ರವೇಶಕ್ಕಾಗಿ ಬಳಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.

ಪಾಲಿಕೆಯ ಅಧಿಕಾರಿ / ನೌಕರರುಗಳ ವಾಹನಗಳಿಗೆ ವಾಹನ ನಿಲ್ದಾಣ ಸ್ಥಳಗಳನ್ನು ಗುರುತಿಸಿ ಎಲ್ಲಾ ಅಧಿಕಾರಿ / ನೌಕರರುಗಳಿಗೆ ವಾಹನ ನಿಲುಗಡೆ ಪಾಸ್ ಅನ್ನು ವಿತರಿಸುವುದು ಹಾಗೂ ಪಾಲಿಕೆ ಅಧಿಕಾರಿ / ನೌಕರರ ವಾಹನಗಳಿಗೆ ಗುರುತಿನ ಚೀಟಿಯನ್ನು ಸಹ ವಿತರಿಸುವುದು.

ಪಾಲಿಕೆಯ ಕಛೇರಿಗಳಿಗೆ ಬೇಟಿಕೊಡುವ ಸಾರ್ವಜನಿಕರ ವಾಹನಗಳಿಗೆ ನಿಲ್ದಾಣಸ್ಥಳಗಳನ್ನು ಗುರಿತಿಸಿ ಸಾರ್ವಜನಿಕ ವಾಹನ ನಿಲ್ದಾಣ ನಾಮಫಲಕ ಅಳವಡಿಸಿ, ಸದರಿ ಸ್ಥಳದಲ್ಲಿ ಮಾತ್ರ ಸಾರ್ವಜನಿಕ ವಾಹನ ನಿಲುಗಡೆಗೆ ಸೂಚಿಸಿದೆ. ಸದರಿ ಸ್ಥಳ ಹೊರತುಪಡಿಸಿ ಪಾಲಿಕೆಯ ಆವರಣದ ಬೇರೆ ಯಾವುದೇ ಜಾಗದಲ್ಲಿ ಸಾರ್ವಜನಿಕ ವಾಹನ ನಿಲುಗಡೆಯನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.

ಕಛೇರಿಯ ವೇಳೆಯ ಹೊರತು ಸಂಜೆ 06:00 ಗಂಟೆಯ ನಂತರ ಪಾಲಿಕೆಯ ಆವರಣದಲ್ಲಿ ಯಾವುದೇ ಅನಧಿಕೃತ ವಾಹನ ನಿಲುಗಡೆಯನ್ನು ಕಡ್ಡಾಯವಾಗಿ ನಿಷೇಧಿಸಿದೆ. ಆದಾಗ್ಯೂ ಯಾವುದೇ ಅನಧಿಕೃತ ವಾಹನಗಳ ನಿಲುಗಡೆಯು ಕಂಡುಬಂದಲ್ಲಿ ಸಂಬಂಧಪಟ್ಟ ವ್ಯಾಪ್ತಿಯ ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಅಗತ್ಯ ಕ್ರಮಕೈಗೊಳ್ಳಲು ಈ ಮೂಲಕ ಸೂಚಿಸಿದೆ.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು : ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಆಯುಕ್ತರು / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

. . . 2.

: ಎಲ್ಲಾ ವಲಯ ಅಪರ / ಜಂಟಿ ಆಯುಕ್ತರು ರವರಿಗೆ ಕಳುಹಿಸಿದೆ.

: ಎಲ್ಲಾ ವಲಯ ಮತ್ತು ಯೋಜನೆಗಳ ಮುಖ್ಯ ಅಭಿಯಂತರರು ರವರಿಗೆ ಕಳುಹಿಸಿದೆ.

: ಅಧ್ಯಕ್ಷರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.

: ಮುಖ್ಯ ಲೆಕ್ಕಾಧಿಕಾರಿ / ಮತ್ತು ಎಲ್ಲಾ ವಲಯದ ಸಹಾಯಕ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.

: ಉಪ ನಿಯಂತ್ರಕರು (ಹಣಕಾಸು) ರವರಿಗೆ ಕಳುಹಿಸಿದೆ.

: ಮಾಹಿತಿ ತಂತ್ರಜ್ಞಾನ ಸಲಹೆಗಾರರು ರವರಿಗೆ ಕಳುಹಿಸುತ್ತಾ, ಸದರಿ ಸುತ್ತೋಲೆಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ಸೂಚಿಸಿದೆ.

: ಕಾರ್ಯಪಾಲಕ ಅಭಿಯಂತರರು (ಎಂ.ಪಿ.ಇ.ಡಿ) ರವರು ಸುತ್ತೋಲೆಯಂತೆ ಅಗತ್ಯ ಕ್ರಮಕೈಗೊಂಡು ವರದಿ ಸಲ್ಲಿಸುವುದು.

: ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ / ಸಂಬಂಧಪಟ್ಟ ಅಭಿಯಂತರರುಗಳಿಗೆ

: ಕಛೇರಿ ಪ್ರತಿ.

SC(P)

25